## ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ:208:ವರ್ಗಾವಣೆ:2017-18:ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:14.06.2017.

## ಸುತ್ತೋಲೆ

ವಿಷಯ: 2017-18 ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಬೋಧಕ/ಗ್ರಂಥಪಾಲಕರು/ದೈಹಿಕ ಶಿಕ್ಷಣ ನಿರ್ದೇಶಕರುಗಳ ಕೋರಿಕೆ ವರ್ಗಾವಣೆ ಬಗ್ಗೆ.

ಉಲ್ಲೇಖ: 1. ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿ:12/05/2017.
2. ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿ:07/06/2017.

*****

"ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗಾವಣೆ ನಿಯಂತ್ರಣ) ಕಾಯ್ದೆ-2012" ನ್ನು ದಿನಾಂಕ:01.04.2014ರಿಂದ ಜಾರಿಗೆ ತರಲಾಗಿದ್ದು, ಸದರಿ ಅಧಿನಿಯಮದನ್ವಯ ಬೋಧಕ/ಗ್ರಂಥಪಾಲಕರು/ದೈಹಿಕ ಶಿಕ್ಷಣ ನಿರ್ದೇಶಕರುಗಳ 2017-18ನೇ ಸಾಲಿನ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ನಡೆಸುವ ಸಂಬಂಧ ವರ್ಗಾವಣೆ ಬಯಸಿರುವ ಸಿಬ್ಬಂದಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಂತೆ ಉಲ್ಲೇಖ(1)ರ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು. ಅದರಂತೆ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಬೋಧಕ/ಗ್ರಂಥಪಾಲಕರು/ದೈಹಿಕ ಶಿಕ್ಷಣ ನಿರ್ದೇಶಕರುಗಳ ಅರ್ಜಿಗಳನ್ನು ಪರಿಶೀಲಿಸಿ ವರ್ಗಾವಣೆಗೆ 'ಸಿ' ವಲಯದಲ್ಲಿ ಅರ್ಹತೆ ಪಡೆದಿರುವ ಸಾಮಾನ್ಯ ಪ್ರಕರಣಗಳ ಪಟ್ಟಿಗಳನ್ನು ಉಲ್ಲೇಖ(2)ರಲ್ಲಿ ಪ್ರಕಟಿಸಲಾಗಿದ್ದು, ಪ್ರಸ್ತುತ ಎ ಮತ್ತು ಬಿ ವಲಯಗಳಲ್ಲಿ ಅರ್ಹತೆ ಪಡೆದಿರುವ ಸಾಮಾನ್ಯ ಪ್ರಕರಣಗಳ ಪಟ್ಟಿಗಳನ್ನು ಈ ಮೂಲಕ ಪ್ರಕಟಿಸಲಾಗುತ್ತಿದೆ.

ವರ್ಗಾವಣೆ ಕೋರಿ ಅರ್ಜಿ ಸಲ್ಲಿಸಿರುವ ಸಿಬ್ಬಂದಿಗಳು ಸದರಿ ಪಟ್ಟಿಯನ್ನು ಪರಿಶೀಲಿಸಿ ಜೇಷ್ಠತೆ, ಅರ್ಹತೆ ಹಾಗೂ ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ಯಾವುದೇ ನ್ಯೂನತೆಗಳು ಕಂಡುಬಂದಲ್ಲಿ ಸಂಬಂಧಪಟ್ಟ ದಾಖಲೆಗಳೊಂದಿಗೆ ದಿನಾಂಕ:18.06.2017ರೊಳಗೆ **Email ID: dce.transfers2017@gmail.com** ಮೂಲಕ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.

**ಸೂಚನೆ:**

1) ಕಡ್ಡಾಯ ವರ್ಗಾವಣೆ ಹಾಗೂ ಕೋರಿಕೆ ವಿಶೇಷ ವರ್ಗಾವಣೆ ಪ್ರಕರಣಗಳಲ್ಲಿ ಅವಕಾಶ ಪಡೆದಿದ್ದ ಬೋಧಕ/ಗ್ರಂಥಪಾಲಕರು/ದೈಹಿಕ ಶಿಕ್ಷಣ ನಿರ್ದೇಶಕರುಗಳ ವರ್ಗಾವಣೆಗೆ ಅರ್ಜಿಯನ್ನು ಹೊರತುಪಡಿಸಲಾಗಿರುತ್ತದೆ.
2) ಇಮೇಲ್ ಮೂಲಕ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಮಾತ್ರ ಪರಿಗಣಿಸಲಾಗುವುದು.
3) ದಿನಾಂಕ:18.06.2017ರ ನಂತರ ಸ್ವೀಕೃತವಾದ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.
4) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕರ ವೃಂದಗಳಲ್ಲಿ ವೃಂದ ಬಲದ ಶೇ.8 ರಷ್ಟು ವರ್ಗಾವಣೆಗಳು ಪೂರ್ಣಗೊಂಡಿರುವುದರಿಂದ ಹೆಚ್ಚಿನ ವರ್ಗಾವಣೆಗೆ ಅವಕಾಶವಿಲ್ಲದ ಕಾರಣ ಸದರಿ ವೃಂದಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿರುವುದಿಲ್ಲ.
5) ಇಎಂಐಎಸ್ ತಂತ್ರಾಂಶದಲ್ಲಿ ಕಾಲೇಜುಗಳಿಂದ ಅಪ್‌ಲೋಡ್ ಮಾಡಲಾಗಿರುವ ಮಾಹಿತಿಗಳ ಆಧಾರದ ಮೇಲೆ ವರ್ಗಾವಣೆಗಳನ್ನು ಮಾಡುವುದರಿಂದ ಕಾರ್ಯಭಾರ ಹಾಗೂ ಖಾಲಿ ಹುದ್ದೆಗಳಿಗೆ ಸಂಬಂಧಿಸಿದಂತೆ ವರ್ಗಾವಣೆ ಸಂದರ್ಭದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ, ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

*(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)*

Shilpa

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

**ಇವರಿಗೆ:**

1) ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.
2) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ-ತುರ್ತು ಕ್ರಮಕ್ಕಾಗಿ.
3) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಅಗತ್ಯ ಕ್ರಮಕ್ಕಾಗಿ.
4) ಕಛೇರಿ ಪ್ರತಿ.

*DCE 208 Circular-1*